ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಲೋಕಸೇವಾ ಆಯೋಗದ ಮೂಲಕ ನೇರ ನೇಮಕಾತಿ ಮಾಡಲು ಈಗಾಗಲೇ ಕ್ರಮ ತೆಗೆದುಕೊಳ್ಳಲಾಗಿದೆ. ಯಾವ ವೈದ್ಯರೂ ಈಗ ನಿಯೋಜನೆಯ ಮೇರೆಗೆ ಪರದೇಶಕ್ಕೆ ಹೋಗಿಲ್ಲ.

ರಾಜ್ಯದ ದೊಡ್ಡ ಆಸ್ಪತ್ರೆಗಳ ಆಪರೇಷನ್ ಥಿಯೇಟರ್ ಸುವ್ಯವಸ್ಥೆ ಬಗ್ಗೆ

474. ಶ್ರೀ ಜೆ.ಎಸ್. ಆಚಾರ್ (ಬೈಂದೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ದೊಡ್ಡ ಆಸ್ಪತ್ರೆಗಳಲ್ಲಿ ಆಪರೇಷನ್ ಥಿಯೇಟರುಗಳನ್ನು ಸುವ್ಯವಸ್ಥಿತವಾಗಿ ಸುಸಜ್ಜಿತವಾಗಿ ಇರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಆ) ಈ ವಿಚಾರ ಕಾಲಕಾಲಕ್ಕೆ ಪರಿಶೀಲಿಸಿ ವರದಿ ಮಾಡಲು ಹಿರಿಯ ಅಧಿಕಾರಿಗಳ ಸಮಿತಿಯನ್ನು ಸರ್ಕಾರ ನೇಮಕ ಮಾಡಿದೆಯೇ?

ಇ) ಹಾಗಿದ್ದಲ್ಲಿ ಅವರು ಕಳೆದ 3 ವರ್ಷಗಳಲ್ಲಿ ದೊಡ್ಡ ಆಸ್ಪತ್ರೆಗಳನ್ನು ಸಂದರ್ಶಿಸಿದ್ದಾರೆ. ಹಾಗೂ ಎಷ್ಟು ವರದಿಗಳನ್ನು ಸಲ್ಲಿಸಿದ್ದಾರೆ.

ಈ) ಆ ವರದಿಗಳ ಆಧಾರದ ಮೇಲೆ ಯಾವ ರೀತಿ ಸುಧಾರಣೆ ಆಗಿದೆ?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯದ ಶಿಕ್ಷಣ ವ್ಯಾಪ್ತಿಗೆ ಒಳಪಟ್ಟಿರುವ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಒಂದು ಶಸ್ತ್ರ ಚಿಕಿತ್ಸಾ ಪ್ರಾಧ್ಯಾಪಕರ ಹುದ್ದೆಯನ್ನು ಹಿರಿಯ ಶಸ್ತ್ರ ಚಿಕಿತ್ಸಕರು ಮತ್ತು ಶಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರು ಎಂಬ ಹುದ್ದೆಗೆ ಮೇಲು ದರ್ಜೆಗೇರಿಸಿ, ಆ ಹುದ್ದೆಯಲ್ಲಿರುವ ಅಧಿಕಾರಿಗೆ ದೊಡ್ಡ ಆಸ್ಪತ್ರೆಗಳಲ್ಲಿರುವ ಆಪರೇಷನ್ ಥಿಯೇಟರುಗಳನ್ನು ಸುವ್ಯವಸ್ಥಿತವಾಗಿ ಸುಸಜ್ಜಿತವಾಗಿರುವಂತೆ ಸಲಹೆಗಳನ್ನು ಕೊಡುವ ಜವಾಬ್ದಾರಿಯನ್ನು ವಹಿಸಲಾಗಿದೆ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಜಯದೇವ ಹೃದ್ರೋಗ ಸಂಸ್ಥೆಯಂತೆ ವಿಕ್ಟೋರಿಯಾ ಮತ್ತು ಬೌರಿಂಗ್ ಆಸ್ಪತ್ರೆಗಳನ್ನು ಸ್ವಾಯತ್ ಸಂಸ್ಥೆಗಳಾಗಿ ಪರಿವರ್ತಿಸುವುದು

466. ಶ್ರೀ ಪರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಯದೇವ ಹೃದ್ರೋಗ ಸಂಸ್ಥೆಯಂತೆ ವಿಕ್ಟೋರಿಯಾ ಮತ್ತು ಬೌರಿಂಗ್ ಆಸ್ಪತ್ರೆಗಳನ್ನು ಸ್ವಾಯತ್ ಸಂಸ್ಥೆಗಳಾಗಿ ಪರಿವರ್ತಿಸುವ ಬಗ್ಗೆ ಸರ್ಕಾರದ ಮುಂದೆ ಯಾವುದಾದರೂ ಪ್ರಸ್ತಾವನೆ ಇದೆಯೇ?

ಆ) ಹಾಗಿಲ್ಲದಿದ್ದಲ್ಲಿ, ಕೇಂದ್ರ ಸರ್ಕಾರ ಮತ್ತು ಇತರೇ ಸಂಸ್ಥೆಗಳಿಂದ ಸಹಾಯ ಪಡೆದು ಈ ಸಂಸ್ಥೆಗಳನ್ನು ಸರ್ಕಾರ ಸ್ವಾಯತ್ತತೆ ಸಂಸ್ಥೆಗಳಾಗಿ ಪರಿವರ್ತಿಸಲು ಕ್ರಮ ತೆಗೆದುಕೊಳ್ಳುವುದೇ?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

Reconstitution of Boards of visitors committees for Victoria, Bowring, K.C. General and Minto Hospitals

468. Sri Perikal M. Mallappa (Chickpet) : Will the Minister for Health & Family Welfare be pleased to state?

a) Whether the Government has reconstituted the Boards of Visitors Committee for Victoria Bowring, K.C. General and Minto Hospitals?

b) If not, when these committees would be reconstituted?

Smt. K.S. Nagarathnamma (Minister for Health and Family Welfare):-

a) No

b) It is under the consideration of the Government.

ಗ್ರಾಮೀಣ ಪ್ರದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯಾಧಿಕಾರಿಗಳಿಗೆ ವಿಶೇಷ ಭತ್ಯೆಗಳನ್ನು ಮಂಜೂರು ಮಾಡುವುದು

(552) ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಗ್ರಾಮೀಣ ಪ್ರದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯಾಧಿಕಾರಿಗಳಿಗೆ ವಿಶೇಷ ಭತ್ಯೆಗಳನ್ನು ಮಂಜೂರು ಮಾಡುವ ವಿಷಯ ಸರ್ಕಾರದ ಮುಂದಿದೆಯೇ?

2) ಹಾಗಿದ್ದರೆ ಅದನ್ನು ಯಾವಾಗ ಜಾರಿಗೊಳಿಸಲಾಗುವುದು?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

1) ಹೌದು.

2) ಈ ವಿಷಯದ ಬಗ್ಗೆ ವಿಚಾರ ಮಾಡಲಾಗುತ್ತದೆ.

ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಬಗ್ಗೆ

553. ಶ್ರೀ ಪಿ.ಜಿ.ಆರ್. ಸಿಂಧ್ಯಾ (ಕನಕಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇದೆ ಎಂದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕೊರತೆಯನ್ನು ನೀಗಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಕೆಲಮಟ್ಟಿಗೆ ಹೌದು.

ಆ) ಹಣದ ಲಭ್ಯತೆಯನ್ನು ಅನುಸರಿಸಿ, ಔಷಧಿಗಳಿಗೆ ಕೊಟ್ಟ ಅನುದಾನವನ್ನು ಹೆಚ್ಚಿಸಲಾಗುವುದು.